ಗಳಡಿಯಲ್ಲಿ ಹೊಸ ಮಂಜೂರಾತಿಗಾಗಿ ಫಲಾನುಭವಿಗಳ ಸಂಖ್ಯೆಯನ್ನು ನಿಗದಿ ಪಡಿಸಲಾಗಿತ್ತು ಆದರೆ ಈಗಾಗಲೇ ಇದನ್ನು ಹಿಂಪಡೆಯಲಾಗಿದೆ.

ಆ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಇ) ಸರ್ಕಾರಿ ಸುತ್ತೋಲೆ ಸಂಖ್ಯೆ: ಆರ್‌ಡಿ 62 ಡಿಎಸ್‌ಪಿ 2009 (1), ದಿನಾಂಕ:28/05/2012 ರನ್ವಯ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿಯಲ್ಲಿ ಹೊಸ ಮಂಜೂರಾತಿಗಾಗಿ ನಿಗದಿ ಪಡಿಸಲಾಗಿದ್ದ ಫಲಾನುಭವಿಗಳ ಸಂಖ್ಯೆಯ ಮಿತಿಯನ್ನು ಹಿಂಪಡೆಯಲಾಗಿದೆ. ಈಗ ಅರ್ಹ ಫಲಾನುಭವಿಗಳಿಗೆ ಮಾಸಾಶನವನ್ನು ಮಂಜೂರು ಮಾಡಲಾಗುತ್ತಿದೆ.

ವಿವಿಧ ವಸತಿ ಯೋಜನೆಗಳ ಫಲಾನುಭವಿಗಳು

754 (239) ಶ್ರೀ ಸುರೇಶ್‌ಗೌಡ (ನಾಗಮಂಗಲ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯ ಸರ್ಕಾರದಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ವಸತಿ ಯೋಜನೆಗಳ ಫಲಾನುಭವಿಗಳ ಪಟ್ಟಿಯಲ್ಲಿ ಅನರ್ಹರು ಆಯ್ಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ರಾಜ್ಯಾದ್ಯಾಂತ ಎಷ್ಟು ಪ್ರಕರಣಗಳು ದಾಖಲಾಗಿವೆ;

ಆ) ಆಯ್ಕೆ ಪಟ್ಟಿಯ ಅನುಮೋದನೆ ಸಂದರ್ಭದಲ್ಲಿ ಸ್ಥಳೀಯ ಶಾಸಕರ ಶಿಫಾರಸ್ಸುಗಳಿಗೆ ಮನ್ನಣೆ ನೀಡದೇ ಅಥವಾ ಅವರ ಗಮನಕ್ಕೆ ತಾರದೇ, ಪಟ್ಟಿಯನ್ನು ಅನುಮೋದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ;

ಇ) ಆಯ್ಕೆ ಪಟ್ಟಿಯಲ್ಲಿ ಸೇರಿರುವ ಅನರ್ಹ ಫಲಾನುಭವಿಗಳ ವಿರುದ್ಧ ಎಷ್ಟು ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲಾಗಿದೆ?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು) :

ಅ) ರಾಜ್ಯದಲ್ಲಿ ಈವರೆಗೆ ವಸತಿ ಯೋಜನೆಗಳಡಿ 390 ಹಾಗೂ ನಿವೇಶನ ಯೋಜನೆಗಳಡಿ 40 ಅನರ್ಹ ಫಲಾನುಭವಿಗಳು ಆಯ್ಕೆಯಾಗಿರುವುದು ಕಂಡುಬಂದಿರುತ್ತದೆ. ಈ ಬಗ್ಗೆ ದೂರುಗಳು ಬರುತ್ತಿವೆ. ಅವುಗಳನ್ನು

ಕೂಲಂಕುಷವಾಗಿ ಪರಿಶೀಲನೆ ನಡೆಸುವಂತೆ ಮತ್ತು ಅನರ್ಹರ ಆಯ್ಕೆಗೆ ಕಾರಣರಾದವರ ಮೇಲೆ ಶಿಸ್ತಿನ ಕ್ರಮ ಜರುಗಿಸುವಂತೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಆ) ಇಂತಹ ಪ್ರಕರಣಗಳು ಕಂಡುಬಂದಿರುವುದಿಲ್ಲ.

ಇ) ಫಲಾನುಭವಿಗಳ ಆಯ್ಕೆ ಪಟ್ಟಿಯಲ್ಲಿ ಸೇರಿರುವ ಅನರ್ಹ ಫಲಾನುಭವಿಗಳ ವಿರುದ್ಧ ಮೊಳಕಾಲ್ಮೂರು ತಾಲ್ಲೂಕಿನ ಹಿರೆಕೆರೆಹಳ್ಳಿ ಗ್ರಾಮ ಪಂಚಾಯತಿಯಲ್ಲಿ 1, ಮಂಡ್ಯ ತಾಲ್ಲೂಕಿನ ಬಸರಾಳು ಗ್ರಾಮ ಪಂಚಾಯಿತಿಯಲ್ಲಿ 1, ಶಿವಮೊಗ್ಗ ತಾಲ್ಲೂಕಿನ ಹಾರನಹಳ್ಳಿ ಗ್ರಾಮ ಪಂಚಾಯತಿಯಲ್ಲಿ 1 ಮೊಕದ್ದಮೆಗಳು ಸೇರಿ ಒಟ್ಟು 3 ಕ್ರಿಮಿನಲ್ ಮೊಕದ್ದಮೆಗಳನ್ನು 43 ಫಲಾನುಭವಿಗಳ ಮೇಲೆ ಸಂಬಂಧಪಟ್ಟ ತಾಲ್ಲೂಕುಗಳ ಅನುಷ್ಠಾನಾಧಿಕಾರಿಗಳಿಂದ ದಾಖಲಿಸಲಾಗಿರುತ್ತದೆ.

ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವುದು

724 (250) ಶ್ರೀ ಕುಮಾರಸ್ವಾಮಿ ಕೆ.ಜಿ. (ಶಿವಮೊಗ್ಗ ಗ್ರಾಮಾಂತರ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯುತ್ ಕೊರತೆಯ ಕಾರಣದಿಂದ ಹೆಚ್ಚುವರಿಯಾಗಿ 25 ಕೆ.ವಿ.ಎ. 63 ಕೆ.ವಿ.ಎ. 75 ಕೆ.ವಿ.ಎ. ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲು ಎಷ್ಟು ಪ್ರಸ್ತಾವನೆ/ಅರ್ಜಿಗಳು ಬಂದಿವೆ; (ವಿವರ ಒದಗಿಸುವುದು);

ಆ) ಎಷ್ಟು ಅರ್ಜಿಗಳಿಗೆ ಟ್ರಾನ್ಸ್‌ಫಾರ್ಮರ್‌ಗಳನ್ನು ವಿತರಿಸಿದ್ದೀರಿ; ವಿವಿಧ ಬೇಡಿಕೆಗಳ ಪ್ರಸ್ತಾವನೆಗಳ ಬಗ್ಗೆ ತೆಗೆದುಕೊಂಡ ಕ್ರಮಗಳೇನು ವಿವರ ನೀಡುವುದು;

ಇ) ತಮ್ಮಡಿಹಳ್ಳಿ, ಪಿಳ್ಳಂಗೆರೆ, ಕೊಮ್ಮನಾಳು, ಸಂತೆಕಡೂರು, ನಿದಿಗೆ ಹೋಬಳಿಗಳಲ್ಲಿ ವಿದ್ಯುತ್ ವಿತರಣಾ ಕೇಂದ್ರವನ್ನು ಸ್ಥಾಪಿಸಲು ತಾಂತ್ರಿಕ